Bangalore
Regional News
04.11.2026 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಬಸ್ ದರ ಹೆಚ್ಚಳ ಮಾಡಿ ಸರ್ಕಾರ ಆದೇಶ : ಇಂದು ಮಧ್ಯರಾತ್ರಿಯಿಂದಲೇ ನೂತನ ದರ ಜಾರಿ

2. ಬೆಂಗಳೂರಿನಲ್ಲಿಂದು 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ

3. ಇದೇ ೧೩ರಿಂದ ೩೦ರವರೆಗೆ "ಮಕ್ಕಳ ಗ್ರಾಮಸಭೆ" ನಡೆಸಲು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ ಖಂಡ್ರೆ ಸೂಚನೆ

4. ಬೆಳಗಾವಿಯಲ್ಲಿ ತೀವ್ರಗೊಂಡ ಕಬ್ಬು ಬೆಳೆಗಾರರ ಪ್ರತಿಭಟನೆ : ಕಾರ್ಖಾನೆ ಮಾಲೀಕರೊಂದಿಗೆ ಸಚಿವ ಸತೀಶ್ ಜಾರಕಿಹೊಳಿ ಚರ್ಚೆ

<><><><>

ಹಾಲು, ಮೊಸರಿನ ಬೆಲೆ ಏರಿಕೆ ಬೆನ್ನಲ್ಲೇ ರಾಜ್ಯ ಸರ್ಕಾರ ಬಸ್ ದರ ಹೆಚ್ಚಳ ಮಾಡಿ ಆದೇಶ ಹೊರಡಿಸಿದೆ. ಕೆಎಸ್ಆರ್‌ಟಿಸಿ ಬಸ್ ದರ ಗರಿಷ್ಠ ೯ ರೂಪಾಯಿ ಏರಿಕೆಯಾಗಿದೆ. ಬಿಎಂಟಿಸಿ ಬಸ್ ದರ ಪ್ರತಿ ಸ್ಟೇಜ್‌ಗೆ ೬ ರೂಪಾಯಿಂದ ೧೦ ರೂಪಾಯಿವರೆಗೆ ಹೆಚ್ಚಳವಾಗಿದೆ. ಇಂದು ಮಧ್ಯರಾತ್ರಿಯಿಂದಲೇ ನೂತನ ದರ ಜಾರಿಗೆ ಬರಲಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಾರಿಗೆ ಸಚಿವ, ಬೈರತಿ ಸುರೇಶ್, ನೂತನ ದರ ಪ್ರಕಟಿಸಿದ್ದಾರೆ. ಸಾಮಾನ್ಯ ಸಾರಿಗೆ ಸೇವೆಗಳಲ್ಲಿ ಗರಿಷ್ಠ ೯ ರೂಪಾಯಿಗಳಷ್ಟು ಪ್ರಯಾಣ ದರ ಹೆಚ್ಚಳಕ್ಕೆ ಅವಕಾಶವಿದ್ದು, ಹಂತ ಹಂತವಾಗಿ ದರ ಏರಿಕೆ ಜಾರಿಗೆ ಬರಲಿದೆ ಎಂದು ತಿಳಿಸಿದ್ದಾರೆ. ಕೆಎಸ್ಆರ್‌ಟಿಸಿ ಎಕ್ಸ್‌ಪ್ರೆಸ್ ಬಸ್‌ಗಳ ದರ ೮೧ ರೂಪಾಯಿ ಯಿಂದ ೧೦೦ ರೂಪಾಯಿಗೆ ಅಂದರೆ ಶೇಕಡ ೧೯ರಷ್ಟು ದರ ಹೆಚ್ಚಳವಾಗಲಿದೆ ಎಂದು ಹೇಳಿದ್ದಾರೆ. ಬಿಎಂಟಿಸಿ ಬಸ್ ಪ್ರಯಾಣ ದರದಲ್ಲಿ ೪ ರೂಪಾಯಿಗಳಷ್ಟು ಹೆಚ್ಚಳವಾಗಲಿದೆ. ಕೇಂದ್ರ ಸರ್ಕಾರ ಡೀಸೆಲ್ ಬೆಲೆ ಏರಿಕೆ ಮಾಡಿರುವುದರಿಂದ ಸಾರಿಗೆ ನಿಗಮಕ್ಕೆ ಹೊರೆಯಾಗುತ್ತಿದ್ದು, ಸಾರಿಗೆ ನಿಗಮದ ನಷ್ಟ ಭರಿಸಲು ಬೆಲೆ ಏರಿಕೆ ಅನಿವಾರ್ಯವಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಉಚಿತ ಬಸ್ ಪ್ರಯಾಣದಿಂದ ನಿಗಮಗಳಿಗೆ ನಷ್ಟವಾಗುತ್ತಿಲ್ಲ ಎಂದು ತಿಳಿಸಿದ ಅವರು, ಮಹಿಳೆಯರ ಟಿಕೆಟ್ ಹಣವನ್ನು ಸರ್ಕಾರವೇ ಭರಿಸುತ್ತಿದೆ ಎಂದು ಸ್ಪಷ್ಟನೆ

ನೀಡಿದ್ದಾರೆ. ಡೀಸೆಲ್ ದರ ಹಾಗೂ ನಿರ್ವಹಣಾ ವೆಚ್ಚ ಹೆಚ್ಚಾದಾಗ ಮಾತ್ರ ಟಿಕೆಟ್ ದರ ಏರಿಸಲು ನಿಗಮಗಳಿಗೆ ಅವಕಾಶ ನೀಡಲಾಗಿದೆ ಎಂದು ತಿಳಿಸಿದ್ದಾರೆ.

<><><><>

ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಶೈಕ್ಷಣಿಕ ಗುಣಮಟ್ಟ ಸುಧಾರಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ರೂಪಿಸಿರುವ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಸರ್ಕಾರಿ ಶಾಲೆಗಳ ಅಭಿವೃದ್ಧಿಯಲ್ಲಿ ಖಾಸಗಿ ಕಂಪನಿಗಳು, ಕೈಗಾರಿಕಾ ಸಂಸ್ಥೆಗಳು ಹಾಗೂ ಸಮಾಜದ ಸಹಭಾಗಿತ್ವ ಮಹತ್ವದ್ದಾಗಿದೆ ಎಂದು ತಿಳಿಸಿದರು. ಸಿಎಸ್‌ಆರ್ ನಿಧಿಯನ್ನು ಸಮರ್ಪಕವಾಗಿ ಬಳಸಿಕೊಂಡು ಶಾಲೆಗಳಿಗೆ ಅಗತ್ಯವಿರುವ ಮೂಲಸೌಕರ್ಯ, ಕಲಿಕಾ ಸೌಲಭ್ಯ, ಡಿಜಿಟಲ್ ಶಿಕ್ಷಣ ಹಾಗೂ ಗುಣಮಟ್ಟದ ಶಿಕ್ಷಣ ಒದಗಿಸಲು ಸಂಸ್ಥೆಗಳು ಕೈಜೋಡಿಸಬೇಕು ಎಂದು ಕರೆ ನೀಡಿದರು.
ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಉಪಸಭಾಪತಿ ಮಂಕಾಳ್ ವೈದ್ಯ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಎಸ್‌ಆರ್ ಪ್ರತಿನಿಧಿಗಳು ಉಪಸ್ಥಿತರಿದ್ದರು.

<><><><>

ಮಾಜಿ ಪ್ರಧಾನಿ ಪಂಡಿತ್ ನೆಹರೂ ಜನ್ಮ ದಿನವನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸುವ ಸಂದರ್ಭದಲ್ಲಿ, ಇಂದಿನ ಮಕ್ಕಳಿಗೆ ಗ್ರಾಮ ಪಂಚಾಯತಿಯ ಪರಿಕಲ್ಪನೆ ಪರಿಚಯಿಸಲು ಮಕ್ಕಳ ಗ್ರಾಮ ಸಭೆ ನಡೆಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ. ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ೨೦೦೬ರಲ್ಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ "ಮಕ್ಕಳ ಗ್ರಾಮಸಭೆ" ನಡೆಸುವಂತೆ ಸುತ್ತೋಲೆ ಹೊರಡಿಸಲಾಗಿದೆ. ಈ ವರ್ಷದಿಂದ ಕಡ್ಡಾಯವಾಗಿ ಎಲ್ಲಾ ಗ್ರಾಮ ಪಂಚಾಯತಿಯಲ್ಲೂ ಕಾರ್ಯಕ್ರಮ ಆಯೋಜಿಸಿ, ಇಂದಿನ ಮಕ್ಕಳಿಗೆ ಗ್ರಾಮ ಪಂಚಾಯತಿಯ ಕಾರ್ಯವೈಖರಿಯ ಪರಿಚಯ ಮಾಡಿಸುವುದರ ಜೊತೆಗೆ ಮಕ್ಕಳ ಹಕ್ಕುಗಳು, ಪೌಷ್ಟಿಕಾಂಶ, ಶಿಕ್ಷಣ, ಆರೋಗ್ಯದ ಕುರಿತಂತೆಯೂ ಮಾಹಿತಿ ಒದಗಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಬೆಂಗಳೂರಿನ ಶಾಲಾ ಮಕ್ಕಳಿಗೆ ಜಕ್ಕೂರಿನಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರಣದಲ್ಲಿರುವ ಪಾರಂಪರಿಕ ಮಾದರಿ ಗ್ರಾಮದಲ್ಲಿ ಇದೇ ೧೩ರಿಂದ ೩೦ರವರೆಗೆ ಮಕ್ಕಳ ಗ್ರಾಮಸಭೆ ಆಯೋಜಿಸಿ, ವಿವಿಧ ಶಾಲೆಯ ಮಕ್ಕಳು ಪಾಲ್ಗೊಳ್ಳಲು ಅವಕಾಶ ಕಲ್ಪಿಸುವಂತೆಯೂ ತಮ್ಮ ಟಿಪ್ಪಣಿಯಲ್ಲಿ ತಿಳಿಸಿದ್ದಾರೆ.

<><><><>

ದೇಶದಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಯುವುದು ಇದೇ ಮೊದಲಲ್ಲ ಎಂದು ಸಂಸದ ಮತ್ತು ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ಇಂದು ಏರ್ಪಡಿಸಿದ್ದ "ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ" ಪಾದಯಾತ್ರೆಯ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದಲ್ಲಿ ೧೨ ಬಾರಿ ಎಸ್‌ಐಆರ್ ಪ್ರಕ್ರಿಯೆ ನಡೆದಿದೆ. ೧೦ ಬಾರಿ ಕಾಂಗ್ರೆಸ್ ಆಡಳಿತದಲ್ಲಿ ಎಸ್‌ಐಆರ್ ಪ್ರಕ್ರಿಯೆ ಆಗಿದೆ ಎಂದು ಹೇಳಿದ್ದಾರೆ. ಸಂವಿಧಾನ ವಿರೋಧಿ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದ್ದು, ನೀಟ್ ಪರೀಕ್ಷೆ ಬಗ್ಗೆಯೂ ಅಪಪ್ರಚಾರ ಮಾಡಿದ್ದಾರೆ ಎಂದು ಅಸಮಾಧನ ವ್ಯಕ್ತಪಡಿಸಿದ್ದಾರೆ. ಕಾರ್ಯಕ್ರಮದಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><><>

ಬೆಳಗಾವಿ ಜಿಲ್ಲೆಯಲ್ಲಿ ಕಬ್ಬು ಬೆಳೆಗಾರರು, ಕಬ್ಬಿಗೆ ಲಾಭದಾಯಕ ಬೆಲೆಯನ್ನು ಘೋಷಿಸುವಂತೆ ಸರ್ಕಾರಕ್ಕೆ ಹೊಸ ಗಡುವು ನೀಡಿದ್ದಾರೆ. ತಮ್ಮ ಬೇಡಿಕೆಗಳು ಈಡೇರದಿದ್ದರೆ 'ಜೈಲು ಭರೋ' ಚಳುವಳಿಯನ್ನು ತೀವ್ರಗೊಳಿಸುವುದಾಗಿ ಹಾಗೂ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದ್ದಾರೆ. ಸಕ್ಕರೆ ಕಾರ್ಖಾನೆ ಮಾಲೀಕರು ಹಾಗೂ ರೈತರ ನಡುವಿನ ಬಿಕ್ಕಟ್ಟು ಬಗೆಹರಿಸಲು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ನಿನ್ನೆ ಎರಡು ಸುತ್ತಿನ ಮಾತುಕತೆ ನಡೆಸಿದ್ದರು. ಈ ಮಾತುಕತೆಗಳು ವಿಫಲವಾದ ಹಿನ್ನೆಲೆಯಲ್ಲಿ ರೈತರು ಹೊಸ ಗಡುವು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ಇಂದು ಕಾರ್ಖಾನೆ ಮಾಲೀಕರೊಂದಿಗೆ ಮತ್ತೊಂದು ಸುತ್ತಿನ ಚರ್ಚೆ ನಡೆಸಲಿದ್ದಾರೆ. ಸಕ್ಕರೆ ಕಾರ್ಖಾನೆ ಮಾಲೀಕರು ಪ್ರತಿ ಟನ್‌ಗೆ ೩ ಸಾವಿರದ ೫೦೦ ರೂಪಾಯಿ ನೀಡಲು ನಿರ್ಧರಿಸಿರುವ ಪ್ರಸ್ತಾಪವನ್ನು ರೈತರು ತಿರಸ್ಕರಿಸಿದ್ದಾರೆ. ಪ್ರತಿ ಟನ್‌ಗೆ ೫ ಸಾವಿರದ ೫೦೦ ರೂಪಾಯಿ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿದ್ದಾರೆ.

<><><><>

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಸಮಧಾನ ವ್ಯಕ್ತಪಡಿಸಿದ್ದಾರೆ. ಈ ಕುರಿತಂತೆ ಮಾಧ್ಯಮ ಹೇಳಿಕೆ ನೀಡಿರುವ ಅವರು, ರಾಹುಲ್ ಗಾಂಧಿ ಹಲವಾರು ಬಾರಿ ದೇಶ ವಿರೋಧಿ ಹೇಳಿಕೆ ನೀಡಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ವಿದೇಶದಿಂದ ಹಣ ಹರಿದು ಬರುತ್ತಿದ್ದು, ಆ ಹಣದಿಂದ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸಲಾಗುತ್ತಿದೆ ಎಂದು ದೂರಿದ್ದಾರೆ. ಭಾರತಕ್ಕೆ ಇಡೀ ವಿಶ್ವದಲ್ಲೇ ನಾಯಕಸ್ಥಾನ ಸಿಗಬೇಕು ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯಕ್ಕೆ ನಾವೆಲ್ಲರೂ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದ್ದಾರೆ.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ ೫೦೧ ಸದಸ್ಯರನ್ನು ಒಳಗೊಂಡ ಸಮಿತಿ ರಚಿಸಲಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಜಿ.ಕೃಷ್ಣಪ್ಪ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ವ್ಯಾಪ್ತಿಯ ೨೮ ವಿಧಾನಸಭಾ ಕ್ಷೇತ್ರಗಳು ಹಾಗೂ ೩೬೯ ವಾರ್ಡ್‌ಗಳಲ್ಲಿ ಸಮಿತಿಗಳು ಕಾರ್ಯನಿರ್ವಹಿಸಲಿದ್ದು, ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ತಲುಪಿಸುವುದು ಮತ್ತು ಅನುಷ್ಠಾನದ ಪ್ರಗತಿ ಪರಿಶೀಲಿಸುವುದು ಸಮಿತಿಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ. ಯೋಜನೆಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಹೆಚ್ಚಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಜನಗಣತಿ ಕಾರ್ಯವು ಪ್ರತಿಯೊಬ್ಬ ಸರ್ಕಾರಿ ಅಧಿಕಾರಿಯ ಸೇವಾವಧಿಯಲ್ಲಿ ಒಂದೆರಡು ಬಾರಿ ಮಾತ್ರ ದೊರೆಯುವ ಅಪರೂಪದ ಅವಕಾಶವಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ಅಭಿಪ್ರಾಯಪಟ್ಟಿದ್ದಾರೆ.

ಜನಗಣತಿ-೨೦೨೭ರ ಎರಡನೇ ಹಂತದ ಜನಸಂಖ್ಯಾ ಗಣತಿ ಕುರಿತಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಷ್ಟ್ರ ನಿರ್ಮಾಣದ ಕಾರ್ಯದಲ್ಲಿ ಭಾಗವಹಿಸುವುದು ಕೇವಲ ಕರ್ತವ್ಯವಲ್ಲ, ಅದೊಂದು ವಿಶೇಷ ಗೌರವ ಮತ್ತು ಹೆಮ್ಮೆಯ ಸಂಗತಿಯಾಗಿದೆ ಎಂದು ತಿಳಿಸಿದ್ದಾರೆ. ಅಧಿಕಾರಿಗಳು ಸಂಪೂರ್ಣ ಜವಾಬ್ದಾರಿ, ಬದ್ಧತೆ ಹಾಗೂ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದ್ದಾರೆ. ಜಿಲ್ಲೆಯಲ್ಲಿ ಮೊದಲ ಹಂತದ ಗಣತಿ ಕಾರ್ಯದಡಿ ಒಟ್ಟು ೪ ಲಕ್ಷದ ೬೯ ಸಾವಿರದ ೨೩೫ ಮನೆಗಳನ್ನು ಗುರುತಿಸಿ, ೧೭ ಲಕ್ಷದ ೯೦ ಸಾವಿರದ ೪೨೨ ಜನಸಂಖ್ಯೆಯನ್ನು ದಾಖಲಿಸಲಾಗಿದೆ. ಮನೆಪಟ್ಟಿಯಲ್ಲಿ ದಾಖಲಾದ ಯಾವುದೇ ಮನೆ ಅಥವಾ ಕುಟುಂಬ ಎರಡನೇ ಹಂತದ ಗಣತಿಯಿಂದ ಹೊರಗುಳಿಯದಂತೆ ಅಧಿಕಾರಿಗಳು ವಿಶೇಷ ಗಮನಹರಿಸಬೇಕು ಎಂದು ಸಲಹೆ ನೀಡಿದ್ದಾರೆ.

<><><><>

ಚಾಮರಾಜನಗರದ ಜೆಎಸ್‌ಎಸ್ ಕಾಲೇಜು ಆವರಣದಲ್ಲಿ ಡಾ.ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯ ೧೧೧ ನೇ ಜಯಂತಿ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು. ಕಾರ್ಯಕ್ರಮದಲ್ಲಿ ನಟ ಡಾಲಿ ಧನಂಜಯ ಮಾತನಾಡಿ, ಬಡವರ ಮಕ್ಕಳಿಗಾಗಿ ಶಿವರಾತ್ರಿ ರಾಜೇಂದ್ರ ಶ್ರೀಗಳು ಪ್ರತಿಯೊಬ್ಬರಿಗೂ ಶಿಕ್ಷಣ, ಆರೋಗ್ಯ ಕಲ್ಪಿಸಲು ಶ್ರಮಿಸಿದ್ದಾರೆ. ಸಾವಿರಾರು ಕುಟುಂಬಗಳಿಗೆ ಜೆಎಸ್‌ಎಸ್ ಸಂಸ್ಥೆ ಆಧಾರವಾಗಿದೆ ಎಂದು ಹೇಳಿದರು.

<><><><>

ಸಂಕ್ಷಿಪ್ತ ಸುದ್ದಿಗಳು

1. ಮಹಿಳೆಯರಿಗೆ ಗೃಹಲಕ್ಷ್ಮಿ ಹಣ ನೀಡಲು ರಾಜ್ಯ ಸರ್ಕಾರಕ್ಕೆ ಆರ್ಥಿಕ ಮುಗ್ಗಟ್ಟು ಎದುರಾಗಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದ್ದಾರೆ. ಮಹಿಳೆಯರಿಗಾಗಿ ಮೀಸಲಿಟ್ಟ ೨ ಸಾವಿರದ ೬೬೦ ಕೋಟಿ ರೂಪಾಯಿ ಅನುದಾನವನ್ನು ರಾಜ್ಯ ಖಜಾನೆಯಿಂದ ಮಹಿಳಾ ಅಭಿವೃದ್ಧಿ ನಿಗಮದ ಬ್ಯಾಂಕ್ ಖಾತೆ ವರ್ಗಾಯಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ದೂರಿದ್ದಾರೆ.

2. ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಭಾಯಿಸಲು, ನೈಋತ್ಯ ರೈಲ್ವೆಯು ಯಶವಂತಪುರ-ಮಡಗಾಂವ್ ಮತ್ತು ಮಡಗಾಂವ್-ಬೆಂಗಳೂರು ಕಂಟೋನ್ಮೆಂಟ್ ನಡುವೆ ವಿಶೇಷ ರೈಲು ಸೇವೆಗಳನ್ನು ಒದಗಿಸಲಿದೆ.

3. ಮಹಿಳಾ ಸ್ವ-ಸಹಾಯ ಗುಂಪುಗಳು ಹಾಗೂ ಮಹಿಳಾ ಉದ್ಯಮಗಳನ್ನು ಪ್ರೋತ್ಸಾಹಿಸುವ ಸಲುವಾಗಿ ದೀಪಾವಳಿ ಹಬ್ಬದ ಪ್ರಯುಕ್ತ ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಇದೇ ೬ ರಿಂದ ೮ರವರೆಗೆ ಮೂರು ದಿನಗಳ ಕಾಲ ಡೇ ಎನ್.ಆರ್.ಎಲ್.ಎಂ ಸಂಜೀವಿನಿ ಮಾಸಿಕ ಸಂತೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ.ನವೀನ್ ಭಟ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>